## ಕರ್ನಾಟಕ ಸರ್ಕಾರ

ಸಂ:ಗ್ರಾಅಪ/47/ಗ.ಕೋಶ/2014

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು,ದಿನಾಂಕ:27.02.2015

## ಸುತ್ತೋಲೆ

**ವಿಷಯ:** 2013-14 ಮತ್ತು 2014-15 ಸಾಲಿನಲ್ಲಿ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಬಿಲ್ ಪಾವತಿ ಹಾಗೂ ಮುಕ್ತಾಯಗೊಂಡ ಕಾಮಗಾರಿಗಳಿಗೆ self auditing ಮಾಡುವ ಕುರಿತು.

**ಉಲ್ಲೇಖ:** ಹಿರಿಯ ತಾಂತ್ರಿಕ ನಿರ್ದೇಶಕರು, ಎನ್.ಐಸಿ, ಬೆಂಗಳೂರು ಇವರ ಇ-ಮೇಲ್ ದಿನಾಂಕ:26.02.2015.

*****

ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಜಿ.ಪಂ, ತಾ.ಪಂ, PRED, KRIDL, KRRDA ಮತ್ತು RWS ನ ಎಲ್ಲಾ ವಿಭಾಗಗಳ ಲಾಗಿನ್‌ನಲ್ಲಿ self auditing option ಈಗಾಗಲೇ ನೀಡಲಾಗಿದೆ. ಅದರಲ್ಲಿ ತಪ್ಪಾಗಿ ಅಳವಡಿಸಲಾದ ದಾಖಲೆಗಳು ಮತ್ತು ಛಾಯಾ ಚಿತ್ರಗಳನ್ನು ಸಂಬಂಧಪಟ್ಟ ಅಧಿಕಾರಿಗಳು ಸರಿಪಡಿಸಿಕೊಳ್ಳಬಹುದು. ಹಲವು ಕಛೇರಿಗಳಲ್ಲಿ 2013-14 ಮತ್ತು 2014-15 ಸಾಲಿನ ದಾಖಲೆಗಳು ಮತ್ತು ಛಾಯಾ ಚಿತ್ರಗಳನ್ನು ತಪ್ಪಾಗಿ ಅಳವಡಿಸಿದ್ದು, ಸದರಿ ಕಾಮಗಾರಿಗಳಿಗೆ ಬಿಲ್ ಪಾವತಿಮಾಡಿ ಕಾಮಗಾರಿಯನ್ನು ಮುಕ್ತಾಯಗೊಳಿಸಿರುತ್ತಾರೆ. ಇದರಿಂದಾಗಿ ಸಾರ್ವಜನಿಕ Domain ನಲ್ಲಿ ತಪ್ಪು ಮಾಹಿತಿ ಲಭ್ಯವಾಗುತ್ತಿದೆ.

ಈ ಸಮಸ್ಯೆಯನ್ನು ಬಗೆಹರಿಸಲು ಎನ್.ಐ.ಸಿ ಯವರು 2013-14 ಮತ್ತು 2014-15 ರ ಸಾಲಿನಲ್ಲಿ ಬಿಲ್ ಪಾವತಿ ಮತ್ತು ಮುಕ್ತಾಯಗೊಂಡ ಕಾಮಗಾರಿಗಳಿಗೆ self auditing ಮಾಡಿ ತಪ್ಪಾಗಿ ನಮೂದಿಸಿದ ದಾಖಲೆಗಳು ಮತ್ತು ಛಾಯಾ ಚಿತ್ರಗಳನ್ನು ಸರಿಪಡಿಸಲು ಅವಕಾಶ ಕಲ್ಪಿಸಿರುತ್ತಾರೆ.

**ಸದರಿ ಅವಕಾಶವನ್ನು ಉಪಯೋಗಿಸಿಕೊಂಡು ತಂತ್ರಾಂಶದಲ್ಲಿ 2013-14 ಮತ್ತು 2014-15ರ ಸಾಲಿನಲ್ಲಿ ತಪ್ಪಾಗಿ ಅಳವಡಿಸಲಾದ ಕಾಮಗಾರಿಗಳ ದಾಖಲೆಗಳು ಮತ್ತು ಛಾಯಾ ಚಿತ್ರಗಳನ್ನು ದಿನಾಂಕ:10.03.2015 ರೊಳಗೆ ಸರಿಪಡಿಸಬೇಕೆಂದು ಈ ಮೂಲಕ ಸೂಚಿಸಲು ನಿರ್ದೇಶಿತನಾಗಿದ್ದೇನೆ.**

(ಅಮುಕಾ ರಿಂದ ಅನುಮೋದಿತ)

(ಮಹದೇವ)
ನಿರ್ದೇಶಕರು (ಇ-ಆಡಳಿತ) ಮತ್ತು
ಸ್ವಉದ್ಯೋಗ ಕಾರ್ಯಕ್ರಮ ಹಾಗೂ
ಪ/ನಿ ಸರ್ಕಾರದ ಉಪಕಾರ್ಯದರ್ಶಿ (ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಆಯುಕ್ತರು, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ (KRIDL).

..2

6. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ರೂರಲ್ ಡೆವಲಪ್‌ಮೆಂಟ್ ಏಜೆನ್ಸಿ (KRRDA).
7. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಉಪಕಾರ್ಯದರ್ಶಿ ಮತ್ತು ಮುಖ್ಯಲೆಕ್ಕಾಧಿಕಾರಿಗಳು.
8. ನೋಡಲ್ ಅಧಿಕಾರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
9. ನೋಡಲ್ ಅಧಿಕಾರಿ, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
10. ನೋಡಲ್ ಅಧಿಕಾರಿ, ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ (KRIDL).
11. ನೋಡಲ್ ಅಧಿಕಾರಿ, ಕರ್ನಾಟಕ ರೂರಲ್ ಡೆವಲಪ್‌ಮೆಂಟ್ ಏಜೆನ್ಸಿ (KRRDA).
12. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಹಣಾಧಿಕಾರಿಗಳು.
13. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಯೋಜನಾ ವ್ಯವಸ್ಥಾಪಕರು.

**ಪ್ರತಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿ, ಗ್ರಾಅಪ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಹಿರಿಯ ತಾಂತ್ರಿಕ ನಿರ್ದೇಶಕರು, ಎನ್.ಐ.ಸಿ. ಬೆಂಗಳೂರು.

c:\users\acer\desktop\jg\circular\self auditing.docx